## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸೋಲಾರ್ ಪಾರ್ಕ್‌ಗಳನ್ನು ಸ್ಥಾಪಿಸುವ ಪ್ರಸ್ತಾವನೆಗಳಿಗೆ ಶುಲ್ಕ ನಿಗದಿಪಡಿಸುವ ಕುರಿತು.
ಓದಲಾಗಿದೆ:

1. ಸರ್ಕಾರದ ಸೌರ ವಿದ್ಯುತ್ ನೀತಿ 2014–21 ಅಧಿಸೂಚನೆ ಸಂಖ್ಯೆ: ಇಎನ್ 21 ವಿಎಸ್‌ಸಿ 2014 ದಿನಾಂಕ: 22.05.2014.
2. ನವ ಮತ್ತು ನವೀಕರಿಸಬಹುದಾದ ಇಂಧನ ಮಂತ್ರಾಲಯ ರವರ ಪತ್ರ ಸಂಖ್ಯೆ: 30/26/2014–15/NSM ದಿನಾಂಕ: 06.07.2015.
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್ ರವರ ಪತ್ರ ಸಂಖ್ಯೆ: KREDL/07/SP/ED/2015-16/2722 ದಿನಾಂಕ: 10.08.2015.

********

ಪ್ರಸ್ತಾವನೆ:

ಭಾರತ ಸರ್ಕಾರದ ನವ ಮತ್ತು ನವೀಕರಿಸಬಹುದಾದ ಇಂಧನ ಮಂತ್ರಾಯದ(ಎಂ.ಎನ್.ಆರ್.ಇ) ಮೇಲೆ ಓದಲಾದ (2)ರ ಮಾರ್ಗಸೂಚಿಯಂತೆ ಮತ್ತು ರಾಜ್ಯದ ಸೌರ ವಿದ್ಯುತ್ ನೀತಿ 2014–21 ರಂತೆ ರಾಜ್ಯದಲ್ಲಿ ಸೋಲಾರ್ ಪಾರ್ಕ್ ಸ್ಥಾಪಿಸಲು ಉದ್ದೇಶಿಸಿದೆ. ಇದರಂತೆ ರಾಜ್ಯದಲ್ಲಿ ಸೋಲಾರ್ ಪಾರ್ಕ್ ಅಭಿವೃದ್ದಿಗಾಗಿ ಈಗಾಗಲೇ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ (ಕೆ.ಆರ್.ಇ.ಡಿ.ಎಲ್) ಮತ್ತು ಕೇಂದ್ರ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿರುವ M/s. Solar Energy Corporation of India ಜಂಟಿ ಸಹಯೋಗದೊಂದಿಗೆ ಕರ್ನಾಟಕ ಸೋಲಾರ್ ಪವರ್ ಡೆವಲಪ್‌ಮೆಂಟ್ ಕಾರ್ಪೋರೇಷನ್ ಪ್ರವೈಟ್ ಲಿಮಿಟೆಡ್ ಕಂಪನಿಯನ್ನು ರಚಿಸಲಾಗಿರುತ್ತದೆ. ಸದರಿ ಕಂಪನಿಯು ರಾಜ್ಯದಲ್ಲಿ ಸೋಲಾರ್ ಪಾರ್ಕ್‌ಗಳನ್ನು ಅಭಿವೃದ್ಧಿಪಡಿಸುತ್ತಿದೆ. ಇದಲ್ಲದೆ ಸೋಲಾರ್ ಪಾರ್ಕ್‌ಗಳನ್ನು ಕಾರ್ಯಸಾಧ್ಯವಾದ ಪಿಪಿಪಿ(Public-Private Partnership) / ಖಾಸಗಿ ಒಡೆತನದ / ಇತರೆ ಮಾಧರಿಯಲ್ಲಿ ಅಭಿವೃದ್ಧಿದಾರರು ಸ್ಥಾಪಿಸಲು ಸೌರ ನೀತಿಯಲ್ಲಿ ಉದ್ದೇಶಿಸಿದೆ.

ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್ ರವರು ಮೇಲೆ ಓದಲಾದ (3)ರಲ್ಲಿ ಸೋಲಾರ್ ಪಾರ್ಕ್‌ಗಳನ್ನು ಸ್ಥಾಪಿಸಲು ಅಭಿವೃದ್ಧಿದಾರರು ಕೆ.ಆರ್.ಇ.ಡಿ.ಎಲ್ ಸಂಸ್ಥೆಯನ್ನು ಸಂಪರ್ಕಿಸುತ್ತಿದ್ದಾರೆ ಎಂದು ವರದಿ ಮಾಡಿರುತ್ತಾರೆ ಹಾಗೂ ಈ ಸಂಬಂಧ ಕೆ.ಆರ್.ಇ.ಡಿ.ಎಲ್‌ಗೆ ಪಾವತಿಸಬೇಕಾದ ಅರ್ಜಿ ಶುಲ್ಕ ಮತ್ತು ಫೆಸಿಲಿಟೇಷನ್ ಶುಲ್ಕವನ್ನು ನಿಗದಿಪಡಿಸಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್ ರವರ ಪ್ರಸ್ತಾವನೆಯಂತೆ ಹಾಗೂ ಸೌರ ವಿದ್ಯುತ್ ನೀತಿ 2014–21ರನ್ವಯ, ಸರ್ಕಾರವು ಪಿಪಿಪಿ / ಖಾಸಗಿ ಒಡೆತನ/ಇತರೆ ಮಾಧರಿಯಲ್ಲಿ ಸೋಲಾರ್ ಪಾರ್ಕ್‌ಗಳನ್ನು

ಸ್ಥಾಪಿಸುವ ಪ್ರಸ್ತಾವನೆಗಳಿಗೆ ಶುಲ್ಕ ನಿಗದಿಪಡಿಸುವ ಅವಶ್ಯಕತೆಯನ್ನು ಮನಗೊಂಡು ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 26 ವಿಎಸ್‌ಇ 2015,**
**ಬೆಂಗಳೂರು, ದಿನಾಂಕ: 19.10.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಪಿಪಿಪಿ / ಖಾಸಗಿ ಒಡೆತನ/ಇತರೆ ಮಾಧರಿಯಲ್ಲಿ ಸೋಲಾರ್ ಪಾರ್ಕ್‌ಗಳನ್ನು ಸ್ಥಾಪಿಸುವ ಪ್ರಸ್ತಾವನೆಗಳಿಗೆ ಪ್ರತಿ ಸೋಲಾರ್ ಪಾರ್ಕಿಗೆ ರೂ. 1 ಲಕ್ಷ ದಂತೆ, ಅರ್ಜಿ ಶುಲ್ಕ ನಿಗದಿಪಡಿಸಿ ಆದೇಶಿದೆ.

ಷರತ್ತುಗಳು:

1. ಸೋಲಾರ್ ಪಾರ್ಕಿನಲ್ಲಿ, ಸೌರ ಶಕ್ತಿ ಉತ್ಪಾದನಾ ಘಟಕಗಳನ್ನು ಸ್ಥಾಪಿಸುವ ಅಭಿವೃದ್ಧಿದಾರರು ಫೆಸಿಲಿಟೇಷನ್ ಶುಲ್ಕ ಪ್ರತಿ ಮೆಗಾವ್ಯಾಟ್‌ಗೆ, ಸೌರ ವಿದ್ಯುತ್ ನೀತಿ 2014-21ರಲ್ಲಿ ತಿಳಿಸಿರುವಂತೆ ಪಾವತಿಸುವುದು.
2. ಉಳಿದಂತೆ ಇತರೆ ಮಾನದಂಡನಗಳು ಸೌರ ವಿದ್ಯುತ್ ನೀತಿ 2014-21ರಂತೆ ಅನ್ವಯವಾಗುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಎನ್. ಯಡ್ರಾವಿ)
ಸರ್ಕಾರದ ಉಪ ಕಾರ್ಯದರ್ಶಿ
ಇಂಧನ ಇಲಾಖೆ.

ಇವರಿಗೆ,
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಕರ್ನಾಟಕ ರಾಜ್ಯ ಪತ್ರ ಪ್ರಕಟಣೆಗಾಗಿ.

ಪ್ರತಿಗಳು:-

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, "ಶಾಂತಿ ಗೃಹ" ಪ್ಯಾಲೆಸ್ ರಸ್ತೆ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಬಿಲ್ಡಿಂಗ್, ಬೆಂಗಳೂರು.
2. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
5. ಶಾಖೆ ರಕ್ಷಾ ಕಡತ/ಹೆಚ್ಚುವರಿ ಪ್ರತಿ.